**All India Radio: Bangalore**
**Regional Bulletin In Kannada**
**29.06.2025 / 6.40 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.06.2025 / 6.40 p.m.**
**<><><><>**

ಮುಖ್ಯಾಂಶಗಳು

1. ಆಪರೇಷನ್ ಸಿಂದೂರ್‌ನಲ್ಲಿ ಪಾಲ್ಗೊಂಡ ವೀರ ಯೋಧರಿಗೆ ಅಹಮದಾಬಾದ್‌ನ 'ಸಿಂದೂರ್ ಅರಣ್ಯ' ಸಮರ್ಪಣೆ; ಮನದ ಮಾತಿನಲ್ಲಿ ಪ್ರಧಾನಿ ನರೇಂದ್ರ ಮೋದಿ
2. ಬಳ್ಳಾರಿಯಲ್ಲಿ ನಡೆಯುವ ೮೮ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಬೂಕರ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಆಯ್ಕೆ
3. ಬಿಬಿಎಂಪಿ ವ್ಯಾಪ್ತಿಯಲ್ಲಿ ಬೃಹತ್ ಇ-ಖಾತಾ ಮೇಳಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚಾಲನೆ
4. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ; ಮಹಾಪೌರ, ಉಪ ಮಹಾಪೌರ ಸ್ಥಾನಗಳಿಗೆ ನಾಳೆ ಚುನಾವಣೆ

<><><><>

ತೀರ್ಥಯಾತ್ರೆಗಳು ದೇಹವನ್ನು ಶಿಸ್ತುಬದ್ಧಗೊಳಿಸುವ, ಮನಸ್ಸನ್ನು ಶುದ್ಧೀಕರಿಸುವ, ಪರಸ್ಪರ ಪ್ರೀತಿ ಮತ್ತು ಸಹೋದರತ್ವವನ್ನು ಬೆಳೆಸುವ, ಭಗವಂತನೊಂದಿಗೆ ಬಂಧವನ್ನು ಬೆಸೆಯುವ ಸಾಧನವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ತಮ್ಮ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದ ೧೨೩ನೇ ಸಂಚಿಕೆಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡುತ್ತಾ, ವಿವಿಧ ವಿಷಯಗಳನ್ನು ಪ್ರಸ್ತಾಪಿಸಿದರು. ಧಾರ್ಮಿಕ ತೀರ್ಥಯಾತ್ರೆಗಳು ಸೇವೆಗೆ ಅವಕಾಶ ಕಲ್ಪಿಸುವ ಒಂದು ದೊಡ್ಡ ಅನುಷ್ಠಾನವು ಆಗಿದೆ. ಯಾವುದೇ ತೀರ್ಥಯಾತ್ರೆ ನಡೆದಾಗ, ತೀರ್ಥಯಾತ್ರೆಗೆ ಹೋಗುವ ಜನರ ಸಂಖ್ಯೆಗಿಂತ ಹೆಚ್ಚಿನ ಜನರು ಯಾತ್ರಿಕರಿಗೆ ಸೇವೆ ಸಲ್ಲಿಸುವ ಕೆಲಸದಲ್ಲಿ ತೊಡಗುತ್ತಾರೆ ಎಂದರು. ಸುದೀರ್ಘ ಕಾಲದ ನಂತರ ಕೈಲಾಸ ಮಾನಸ ಸರೋವರ ಯಾತ್ರೆ ಮತ್ತೆ ಪ್ರಾರಂಭವಾಗಿದೆ. ಕೈಲಾಸ ಮಾನಸ ಸರೋವರ ಅಂದರೆ ಪರಮಾತ್ಮ ಶಿವನ ವಾಸಸ್ಥಾನ. ಹಿಂದೂ, ಬೌದ್ಧ, ಜೈನ, ಪ್ರತಿಯೊಂದು ಸಂಪ್ರದಾಯದಲ್ಲೂ, ಕೈಲಾಸವನ್ನು ಶ್ರದ್ಧೆ ಮತ್ತು ಭಕ್ತಿಯ ಕೇಂದ್ರವೆಂದು ಪರಿಗಣಿಸಲಾಗುತ್ತದೆ. ಇದೇ ವೇಳೆ ಪವಿತ್ರ ಅಮರನಾಥ ಯಾತ್ರೆ ಜುಲೈ ೩ ರಿಂದ ಪ್ರಾರಂಭವಾಗಲಿದೆ ಎಂದು ಪ್ರಧಾನಿ ಹೇಳಿದರು. ಈ ತಿಂಗಳು ‘ವಿಶ್ವ ಪರಿಸರ ದಿನ’ ಆಚರಿಸಲಾಯಿತು. ಗುಜರಾತ್ ನ ಅಹಮದಾಬಾದ್ ನಗರದಲ್ಲಿ ಪರಿಸರಕ್ಕಾಗಿ ಸುಂದರ ಉಪಕ್ರಮ ಆರಂಭಿಸಲಾಗಿದೆ. ಇಲ್ಲಿ ನಗರ ನಿಗಮವು ‘ದಶಲಕ್ಷ ಮರಗಳ ಅಭಿಯಾನ’ – `Mission for Million Trees' ಆರಂಭಿಸಿದೆ. ಲಕ್ಷಾಂತರ ಮರಗಳನ್ನು ನೆಡುವುದು ಇದರ ಗುರಿಯಾಗಿದೆ ಎಂದು ಪ್ರಧಾನಿ ತಿಳಿಸಿದರು. ಈ ಅಭಿಯಾನದ ವಿಶೇಷ ವಿಷಯವೆಂದರೆ 'ಸಿಂದೂರ್ ಅರಣ್ಯ'. ಈ ಅರಣ್ಯವನ್ನು ಆಪರೇಷನ್ ಸಿಂದೂರ್‌ನಲ್ಲಿ ಪಾಲ್ಗೊಂಡ ವೀರ ಯೋಧರಿಗೆ ಸಮರ್ಪಿಸಲಾಗುತ್ತಿದೆ. ದೇಶಕ್ಕಾಗಿ ಎಲ್ಲವನ್ನೂ ತ್ಯಾಗ ಮಾಡಿದ ಆ ಧೈರ್ಯಶಾಲಿ ಯೋಧರ ನೆನಪಿಗಾಗಿ ಸಿಂದೂರ್ ಗಿಡಗಳನ್ನು ನೆಡಲಾಗುತ್ತಿದೆ. ನಾವು ಪ್ರಕೃತಿಯನ್ನು ಉಳಿಸಿದಾಗ ಮಾತ್ರ, ನಾವು ನಿಜವಾಗಿಯೂ ಭವಿಷ್ಯದ ಪೀಳಿಗೆಯನ್ನು ರಕ್ಷಿಸುತ್ತೇವೆ ಎಂದು ಪ್ರಧಾನಿ ನರೇಂದ್ರ ಮೋದಿ ತಮ್ಮ ಮನದ ಮಾತಿನಲ್ಲಿ ಹೇಳಿದರು.

<><><><>

ಈ ವರ್ಷ ಬಳ್ಳಾರಿ ನಗರದಲ್ಲಿ ನಡೆಸಲು ಉದ್ದೇಶಿಸಿರುವ ೮೮ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಬೂಕರ್ ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ನಾಡೋಜ ಮಹೇಶ್ ಜೋಶಿ ತಿಳಿಸಿದ್ದಾರೆ. ಬಳ್ಳಾರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ನಡೆದ ಪರಿಷತ್ತಿನ ಕಾರ್ಯಕಾರಿ ಸಮಿತಿ ಸಭೆಯಲ್ಲಿ

ಸಾಹಿತಿಗಳಾದ ವೀಣಾ ಶಾಂತೇಶ್ವರ, ಮಾಲಾತಿ ಪಟ್ಟಣಶೆಟ್ಟಿ, ಬಾನು ಮುಷ್ತಾಕ್ ಅವರ ಹೆಸರುಗಳು ಚರ್ಚೆಗೆ ಬಂದವು. ಅಂತಿಮವಾಗಿ ಲಲನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಬಾನು ಮುಷ್ತಾಕ್ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><><>

ಸಂವಿಧಾನಕ್ಕೆ ೭೮ ಬಾರಿ ತಿದ್ದುಪಡಿ ತಂದ ಕಾಂಗ್ರೆಸ್, ಜಾತ್ಯತೀತ ಪದದ ಬಗ್ಗೆ ಮಾತನಾಡುತ್ತಿದೆ. ಆದರೆ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಅವರು ಬರೆದ ಸಂವಿಧಾನದಲ್ಲಿ ಜಾತ್ಯತೀತ ಪದವೇ ಇಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್‌ಎಸ್‌ಎಸ್ ದತ್ತಾತ್ರೇಯ ಹೊಸಬಾಳೆಯವರು ಹೇಳಿದ್ದು ಕಾಂಗ್ರೆಸ್‌ನವರು ಸೇರಿಸಿದ ಪದಗಳ ಬಗ್ಗೆ ಮಾತ್ರ. ಡಾ.ಬಿ.ಆರ್.ಅಂಬೇಡ್ಕರ್ ಬರೆದ ಸಂವಿಧಾನದಲ್ಲಿ ಜಾತ್ಯತೀತ ಹಾಗೂ ಸಮಾಜವಾದ ಎಂಬ ಪದ ಎಲ್ಲಿದೆ ಎಂಬುದನ್ನು ಕಾಂಗ್ರೆಸ್ ನಾಯಕರು ತೋರಿಸಲಿ ಎಂದು ಸವಾಲು ಹಾಕಿದರು. ರಾಹುಲ್ ಗಾಂಧಿ ಅವರು ಒಂದು ಕಡೆ ಜಾತಿ ಸಮೀಕ್ಷೆ ನಡೆಸಬೇಕೆಂದು ಹೇಳುತ್ತಾರೆ. ಇನ್ನೊಂದು ಕಡೆ ತಾವು ಜಾತ್ಯತೀತ ಎನ್ನುತ್ತಾರೆ. ಜವಹರಲಾಲ್ ನೆಹರು ನೇತೃತ್ವದ ಸರ್ಕಾರ ಒಟ್ಟು ೧೬ ತಿದ್ದುಪಡಿಗಳನ್ನು ಮಾಡಿದೆ. ಇಂದಿರಾಗಾಂಧಿ ನೇತೃತ್ವದ ಸರ್ಕಾರ ೨೭ ತಿದ್ದುಪಡಿಗಳನ್ನು ಮಾಡಿದೆ. ಬಾಬಾ ಸಾಹೇಬರ ಮೂಲ ಆಶಯಗಳನ್ನೇ ಅವರು ತಿದ್ದುಪಡಿ ಮಾಡಿದ್ದಾರೆ. ಒಟ್ಟಾರೆ ಕಾಂಗ್ರೆಸ್ ೭೮ ತಿದ್ದುಪಡಿಗಳನ್ನು ಮಾಡಿದೆ ಎಂದರು. ಶಾಸಕ ಬಿ.ಆರ್.ಪಾಟೀಲ್ ಸೇರಿದಂತೆ ಹಲವು ಕಾಂಗ್ರೆಸ್ ಶಾಸಕರು ಅನುದಾನವಿಲ್ಲದೇ ಕಾಮಗಾರಿ ನಡೆಯುತ್ತಿಲ್ಲ ಎಂದು ದೂರಿದ್ದಾರೆ. ಇನ್ನೊಂದೆಡೆ, ಬಿಬಿಎಂಪಿ ಆರ್ಥಿಕವಾಗಿ ದಿವಾಳಿಯಾಗಿದೆ. 'ನಮ್ಮ ಕ್ಲಿನಿಕ್' ಸಿಬ್ಬಂದಿಗೆ ಸಂಬಳ ನೀಡಿಲ್ಲ. ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಸರ್ಕಾರಕ್ಕೆ ಆಗುತ್ತಿಲ್ಲ. ಇದಕ್ಕಾಗಿ ಇನ್ನಷ್ಟು ತೆರಿಗೆ ಹೇರಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ಆರ್.ಅಶೋಕ ದೂರಿದರು.

<><><><>

ಬಿಬಿಎಂಪಿ ಯಲಹಂಕ ವಲಯದ ಬ್ಯಾಟರಾಯನಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಹಕಾರ ನಗರ ಆಟದ ಮೈದಾನದಲ್ಲಿ ಏರ್ಪಡಿಸಿರುವ ವಲಯ ಮಟ್ಟದ ಬೃಹತ್ ಇ-ಖಾತಾ ಮೇಳಕ್ಕೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಕಂದಾಯ ಸಚಿವ ಕೃಷ್ಣ ಭೈರೇಗೌಡ ಇಂದು ಚಾಲನೆ ನೀಡಿದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ ಒಟ್ಟು ೨೫ ಲಕ್ಷ ಸ್ವತ್ತುಗಳ ಪೈಕಿ ಈಗಾಗಲೇ ೫ ಲಕ್ಷದ ೩೪ ಸಾವಿರದ ೭೬೪ ಸ್ವತ್ತುಗಳಿಗೆ ಖಾತಾದಾರರು ಅಂತಿಮ ಇ-ಖಾತಾವನ್ನು ಪಡೆದಿದ್ದಾರೆ. ಬಿಬಿಎಂಪಿ ಇ-ಖಾತಾ ವ್ಯವಸ್ಥೆಗೆ ಭಾರತ ಸರ್ಕಾರದಿಂದ ೨೦೨೪-೨೫ ನೇ ಸಾಲಿನ ರಾಷ್ಟ್ರೀಯ ಇ-ಆಡಳಿತ ಚಿನ್ನದ ಪ್ರಶಸ್ತಿ ಸಂದಿದೆ. ಯಲಹಂಕ ವಲಯದಲ್ಲಿನ ಒಟ್ಟು ೨ ಲಕ್ಷದ ೨೮ ಸಾವಿರದ ೧೪೭ ಸ್ವತ್ತುಗಳ ಪೈಕಿ ಇಲ್ಲಿಯವರೆಗೆ ೬೧ ಸಾವಿರದ ೫೫ ಸ್ವತ್ತುಗಳಿಗೆ ಅಂತಿಮ ಇ-ಖಾತಾವನ್ನು ನೀಡಲಾಗಿದೆ. ಬ್ಯಾಟರಾಯನಪುರ ವಿಭಾಗದಲ್ಲಿನ ಒಟ್ಟು ೧ ಲಕ್ಷದ ೮೧ ಸಾವಿರದ ೧೩೫ ಸ್ವತ್ತುಗಳ ಪೈಕಿ, ೫೧ ಸಾವಿರದ ೨೮೯ ಸ್ವತ್ತುಗಳಿಗೆ ಅಂತಿಮ ಇ-ಖಾತಾವನ್ನು ನೀಡಲಾಗಿದೆ. ಈ ವೇಳೆ ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ಕಂದಾಯ ವಿಭಾಗದ ವಿಶೇಷ ಆಯುಕ್ತ ಮೌನೀಶ್ ಮೌದ್ಗಿಲ್, ಯಲಹಂಕ ವಲಯ ಆಯುಕ್ತ ಕರೀಗೌಡ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

<><><><>

ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ೨೪ನೇ ಅವಧಿಗೆ ಮಹಾಪೌರ ಹಾಗೂ ಉಪ ಮಹಾಪೌರ ಸ್ಥಾನಗಳಿಗೆ ಚುನಾವಣೆಯು ನಾಳೆ ಬೆಳಗ್ಗೆ ಪಾಲಿಕೆಯ ಸಭಾಭವನದಲ್ಲಿ ನಡೆಯಲಿದೆ. ನಾಳೆ ಬೆಳಗ್ಗೆ ೯ ಗಂಟೆಯಿಂದ ೧೧ ಗಂಟೆಯವರೆಗೆ ಮಹಾಪೌರ ಹಾಗೂ ಉಪಮಹಾಪೌರರ ಸ್ಥಾನಗಳಿಗೆ ನಾಮಪತ್ರಗಳ

ಸಲ್ಲಿಸುವುದು, ನಂತರ ನಾಮಪತ್ರಗಳ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳುವುದು, ಉಮೇದುವಾರರ ಪಟ್ಟಿ ಘೋಷಣೆ, ಅವಿರೋಧ ಆಯ್ಕೆಯಾದಲ್ಲಿ ಫಲಿತಾಂಶ ಘೋಷಣೆ. ಒಬ್ಬರಿಗಿಂತ ಹೆಚ್ಚಿನ ಅಭ್ಯರ್ಥಿಗಳು ಇದ್ದಲ್ಲಿ ಮತದಾನ, ಮತಗಳ ಎಣಿಕೆ ಹಾಗೂ ಫಲಿತಾಂಶ ಘೋಷಣೆ ಪ್ರಕ್ರಿಯೆಗಳು ಜರುಗಲಿವೆ ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತ ಎಸ್.ಬಿ.ಶೆಟ್ಟೆಣ್ಣವರ ತಿಳಿಸಿದ್ದಾರೆ.

<><><><>

ಕೋಲಾರ ಜಿಲ್ಲೆಯ ಶ್ರೀನಿವಾಸಪುರ ಪಟ್ಟಣದಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರ ಸುರಕ್ಷತೆಗಾಗಿ ಎಂಟು ಪ್ರಮುಖ ವೃತ್ತಗಳಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ವಿ.ನಾಗರಾಜು ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಟ್ಟಣದ ವ್ಯಾಪ್ತಿ ಹಾಗೂ ಜನಸಂಖ್ಯೆಯು ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ಅಲ್ಲದೇ, ಇತ್ತೀಚಿನ ದಿನಗಳಲ್ಲಿ ರಾತ್ರಿ ವೇಳೆ ಬಸ್‌ನಲ್ಲಿ ಬರುವ ಪ್ರಯಾಣಿಕರ ಸುರಕ್ಷತೆ ಹಾಗೂ ಜನಸಾಮಾನ್ಯರ ಹಿತದೃಷ್ಟಿಯಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದರು. ಸಿಸಿಟಿವಿ ಗಳ ನೇರ ಪ್ರಸಾರವನ್ನು ಪುರಸಭೆ ನಿಯಂತ್ರಣ ಕೊಠಡಿಯಿಂದ ವೀಕ್ಷಣೆ ಮಾಡಲಾಗುತ್ತದೆ. ಕೆಲವು ಕ್ಯಾಮೆರಾಗಳು ಧ್ವನಿಯನ್ನು ಗ್ರಹಿಸುವ ಸಾಮರ್ಥ್ಯ ಸಹ ಹೊಂದಿವೆ. ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯುವುದು, ಮೂತ್ರವಿಸರ್ಜನೆ ಮಾಡುವಂತಹ ವರ್ತನೆಗಳನ್ನು ನಿಯಂತ್ರಿಸಲು ಸಹ ಇದು ಪ್ರಯೋಜನವಾಗಲಿದೆ ಎಂದು ವಿ.ನಾಗರಾಜು ಹೇಳಿದರು.

<><><><>

ರಾಜ್ಯದ ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ನೈರುತ್ಯ ಮುಂಗಾರು ಸಾಮಾನ್ಯವಾಗಿತ್ತು. ಉತ್ತರ ಒಳನಾಡಿನಲ್ಲಿ ದುರ್ಬಲವಾಗಿತ್ತು. ಕರಾವಳಿಯ ಅನೇಕ ಕಡೆಗಳಲ್ಲಿ ಹಾಗೂ ಒಳನಾಡಿನ ಕೆಲವು ಸ್ಥಳಗಳಲ್ಲಿ ಇಂದು ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ಬಂಟ್ವಾಳದಲ್ಲಿ ಅತೀ ಹೆಚ್ಚು ೬ ಸೆಂಟಿ ಮೀಟರ್ ಮಳೆಯಾಗಿದೆ. ಇದೇ ವೇಳೆ ಕ್ಯಾಸಲ್ ರಾಕ್, ಬಾಗಮಂಡಲ ಮತ್ತು ಆಗುಂಬೆಯಲ್ಲಿ ತಲಾ ೭ ಸೆಂಟಿ ಮೀಟರ್ ಮಳೆಯಾಗಿದೆ. ಮಾಣಿ, ಕದ್ರ, ಪುತ್ತೂರು ಮತ್ತು ಮೂಡುಬಿದ್ರೆಯಲ್ಲಿ ತಲಾ ೫, ಶಕ್ತಿನಗರ, ಮಂಗಳೂರು ವಿಮಾನ ನಿಲ್ದಾಣ, ಕಾರ್ಕಳದಲ್ಲಿ ತಲಾ ೪ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳ ಕಾಲ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಮುಂದಿನ ೨೪ ಗಂಟೆಗಳ ಕಾಲ ಬೆಂಗಳೂರು ಮತ್ತು ಸುತ್ತಾಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ. ಗರಿಷ್ಠ ತಾಪಮಾನ ೨೬ ಹಾಗೂ ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

<><><><>

ಪ್ರಸಕ್ತ ಸಾಲಿನ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಗೆ ಒಳಪಡುವ ರೈತರ ಸೌಲಭ್ಯಕ್ಕೆ ಆಹ್ವಾನಿಸಲಾಗಿದೆ ಎಂದು ಯಾದಗಿರಿ ತೋಟಗಾರಿಕೆ ಉಪ ನಿರ್ದೇಶಕ ರಾಘವೇಂದ್ರ ತಿಳಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ಯಾದಗಿರಿ ಜಿಲ್ಲೆಗೆ ದಾಳಿಂಬೆ, ಪಪ್ಪಾಯ, ಹಸಿ ಮೆಣಸಿನಕಾಯಿ ಹಾಗೂ ದ್ರಾಕ್ಷಿ ಬೆಳೆಗಳ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಅಧಿಸೂಚಿಸಲಾಗಿದೆ. ಬೆಳೆ ಸಾಲ ಪಡೆದ ರೈತರು ಹಾಗೂ ಬೆಳೆ ಸಾಲ ಪಡೆಯದೇ ಇರುವ ರೈತರು, ತಮ್ಮ ಆಧಾರ್ ಕಾರ್ಡ್ ಪ್ರತಿ, ಪಹಣಿ ಪ್ರತಿ ಹಾಗೂ ಬ್ಯಾಂಕ್ ಪಾಸ್‌ಬುಕ್ ಪ್ರತಿಯೊಂದಿಗೆ ಹತ್ತಿರದ ಬ್ಯಾಂಕುಗಳಲ್ಲಿ ಅಥವಾ ಗ್ರಾಮ ಒನ್ ಕೇಂದ್ರಗಳಲ್ಲಿ ವಿಮಾ ಯೋಜನೆಯಡಿ ನೋಂದಾಯಿಸಿಕೊಳ್ಳಬೇಕು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>